**Akashvani : Bangalore**
**16.08.2024 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ೮೮೩ ವಸತಿ ಶಾಲೆಗಳಲ್ಲಿ ವಿಜ್ಞಾನ ತಂತ್ರಜ್ಞಾನದ ಅರಿವು ಮೂಡಿಸಲು ಟೆಲಿಸ್ಕೋಪ್ ಖರೀದಿಗೆ ಕ್ರಮ - ಸಚಿವ ಎನ್.ಎಸ್.ಭೋಸರಾಜು**

**೨. ರಾಜ್ಯದ ಆರ್ಥಿಕ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಮಾಲೋಚನೆ**

**೩. ಕೊಲ್ಕತ್ತಾ ವೈದ್ಯ ಮೇಲಿನ ಲೈಂಗಿಕ ದೌರ್ಜನ್ಯ ಖಂಡಿಸಿ ನಾಳೆ ಮುಷ್ಕರ ; ಜನರಿಗೆ ತೊಂದರೆಯಾಗದಂತೆ ಕ್ರಮ - ಸಚಿವ ದಿನೇಶ್ ಗುಂಡೂರಾವ್**

**೪. ನಾಡಿನೆಲ್ಲೆಡೆ ಇಂದು ವರಮಹಾಲಕ್ಷ್ಮೀ ಹಬ್ಬದ ಸಡಗರ ಸಂಭ್ರಮ**

**<><*<><>*><>**

ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯದಲ್ಲಿ ತಾಂತ್ರಿಕವಾಗಿ ಆಧುನೀಕರಣಕ್ಕೆ ಅಗತ್ಯವಿರುವ ಪರಿಕರಗಳಿಗಾಗಿ ಪ್ರಸ್ತಾವನೆ ಸಲ್ಲಿಸುವಂತೆ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು ಸೂಚನೆ ನೀಡಿದ್ದಾರೆ. ಜವಾಹರಲಾಲ್ ನೆಹರು ತಾರಾಲಯಕ್ಕೆ ಭೇಟಿ ನೀಡಿ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಪರಿಶೀಲನೆ ನಡೆಸಿದ ಅವರು ಅಧಿಕಾರಿಗಳಿಂದ ಮಾಹಿತಿ ಪಡೆದರು. ಸ್ಮಾರ್ಟ್ ಸಿಟಿ ಯೋಜನೆಯಡಿ ಜವಾಹರಲಾಲ್ ನೆಹರು ತಾರಾಲಯದ ಆವರಣದಲ್ಲಿ ಆಧುನಿಕ ಸಭಾಂಗಣ, ಕೊಠಡಿ ಸೇರಿದಂತೆ ಹಲವು ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ. ಈ ಕಟ್ಟಡ ಕಾಮಗಾರಿಯನ್ನು ಸೆಪ್ಟೆಂಬರ್ ೧೫ ರ ಒಳಗಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು. ಇದೇ ವೇಳೆ, ಈ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಇದೇ ತಿಂಗಳು ೨೨ ರಂದು ಸಂಬಂಧ ಪಟ್ಟ ಎಲ್ಲಾ ಅಧಿಕಾರಿಗಳನ್ನು ಒಳಗೊಂಡ ಸಭೆಯನ್ನು ಕರೆಯಲಾಗುವುದು ಎಂದರು. ತಾರಾಲಯದಲ್ಲಿ ಪ್ರಸ್ತುತ ಇರುವ ಅನಲಾಗ್ ಪ್ರೋಜೆಕ್ಟ್‌ರಗಳ ತಾಂತ್ರಿಕ ಉಪಕರಣಗಳು ಹಳೆಯ ತಂತ್ರಜ್ಞಾನವನ್ನು ಹೊಂದಿವೆ. ಇವುಗಳನ್ನು ಬದಲಿಸುವ ಮೂಲಕ ನೂತನ ತಂತ್ರಜ್ಞಾನದ ಎಲ್.ಇ.ಡಿ ಪ್ರೊಜೆಕ್ಟರ್‌ಗಳನ್ನು ಅಳವಡಿಸುವುದು ಅಗತ್ಯವಾಗಿದೆ ಎಂದು ತಾರಾಲಯದ ನಿರ್ದೇಶಕರು ಸಚಿವರಿಗೆ ಮನವಿ ಮಾಡಿದರು. ರಾಜ್ಯದ ಜನರಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಅಗತ್ಯ ಪ್ರೋತ್ಸಾಹ ನೀಡಲಾಗುತ್ತಿದೆ. ಈ ಬಾರಿಯ ಆಯವ್ಯದಲ್ಲಿ ೮೮೩ ವಸತಿ ಶಾಲೆಗಳಲ್ಲಿ ಟೆಲಿಸ್ಕೋಪ್ ಒದಗಿಸಲು ಅಗತ್ಯ ಅನುದಾನ ಬಿಡುಗಡೆ ಮಾಡಲಾಗಿದೆ. ಟೆಲಿಸ್ಕೋಪ್‌ಗಳನ್ನು ಖರೀದಿಸಲು ಈಗಾಗಲೇ ಟೆಂಡರ್‌ಪ್ರಕ್ರಿಯೆ ಚಾಲ್ತಿಯಲ್ಲಿದ್ದು ಆದಷ್ಟು ಶೀಘ್ರದಲ್ಲಿ ಪೂರ್ಣಗೊಳಿಸಲಾಗುವುದು ಎಂದರು. ನಗರದ ನೆಹರು ತಾರಾಲಯದ ಸಹಯೋಗದಲ್ಲಿ ತರಬೇತಿ ಶಿಬಿರಗಳನ್ನು ಆಯೋಜಿಸಲಾಗುವುದು. ಆಯಾ ವಲಯವಾರು ತರಬೇತಿ ಶಿಬಿರಗಳಲ್ಲಿ ಟೆಲಿಸ್ಕೋಪ್ ಬಳಕೆ, ಅದರ ಮೂಲಕ ಅಧ್ಯಯನ ಮತ್ತು ಭೋಧನೆ ಹಾಗೂ ಅದನ್ನು ಸುಸ್ಥಿತಿಯಲ್ಲಿಡುವ ಬಗ್ಗೆ ವಿಜ್ಞಾನ ಶಿಕ್ಷಕರಿಗೆ ತರಬೇತಿ ನೀಡಲಾಗುವುದು ಎಂದು ಸಚಿವ ಎನ್.ಎಸ್.ಭೋಸರಾಜು ತಿಳಿಸಿದರು. ಸಭೆಯಲ್ಲಿ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕ ರಿಜ್ವಾನ್ ಅರ್ಷದ್, ಜವಾಹರಲಾಲ್ ನೆಹರು ತಾರಾಲಯದ ನಿರ್ದೇಶಕರಾದ ಡಾ. ಬಿ ಆರ್ ಗುರುಪ್ರಸಾದ್ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಂಗಳೂರಿನಲ್ಲಿಂದು ಆರ್ಥಿಕ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ರಾಜ್ಯದ ಆರ್ಥಿಕ ಸ್ಥಿತಿಗತಿ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು. ಸಭೆಯಲ್ಲಿ ಕಂದಾಯ ಸಚಿವ ಕೃಷ್ಣಭೈರೇಗೌಡ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ, ಮತ್ತಿತರು ಉಪಸ್ಥಿತರಿದ್ದರು.

**<><*<><>*><>**

ಕೊಲ್ಕತ್ತಾದಲ್ಲಿ ನಡೆದ ವೈದ್ಯೆಯ ಮೇಲಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣವನ್ನು ಖಂಡಿಸಿ ನಾಳೆ ವೈದ್ಯರ ಮುಷ್ಕರಕ್ಕೆ ಭಾರತೀಯ ವೈದ್ಯಕೀಯ ಸಂಸ್ಥೆ - ಐಎಂಎ ಕರೆ ನೀಡಿದ್ದು, ಸಾರ್ವಜನಿಕರಿಗೆ ತೊಂದರೆಯಾಗದಂತೆ ಪ್ರತಿಭಟನೆ ನಡೆಸಲಿ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಈ ಕುರಿತು ಬೆಂಗಳೂರಿನಲ್ಲಿಂದು ಮಾತನಾಡಿದ ಸಚಿವರು, ನಾಳೆ ಖಾಸಗಿ ಆಸ್ಪತ್ರೆಯ ವೈದ್ಯರು ಮುಷ್ಕರಕ್ಕೆ ಕರೆ ನೀಡಿದ್ದಾರೆ. ಈ ಬಗ್ಗೆ ಮೊನ್ನೆ ಪ್ರಧಾನ ಕಾರ್ಯದರ್ಶಿಗಳೊಂದಿಗೆ ಮಾತುಕತೆ ನಡೆಸಲಾಗಿದ್ದು, ಏನೆಲ್ಲ ಕ್ರಮ ಕೈಗೊಳ್ಳಲು ಸಾಧ್ಯ ಎಂಬ ಕುರಿತು ಚರ್ಚಿಸಲಾಗಿದೆ ಎಂದರು. ಪ್ರತಿಭಟಿಸಲು ಮತ್ತು ಅಭಿಪ್ರಾಯ ವ್ಯಕ್ತಪಡಿಸಲು ಅವರಿಗೆ ಅವಕಾಶವಿದೆ. ಆದರೆ ಜನರಿಗೆ ತೊಂದರೆಯಾಗಬಾರದು. ಹೀಗಾಗಿ ಅಗತ್ಯ ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ. ಎಲ್ಲಾ ಸ್ವಂಬಂಧಪಟ್ಟ ವೈದ್ಯ ಸಂಘಟನೆಗಳ ಸಭೆ ಕರೆದು, ಕ್ರಮದ ಕುರಿತು ಚರ್ಚೆ ಮಾಡಲಾಗುವುದು ಎಂದು ದಿನೇಶ್ ಗುಂಡೂರಾವ್ ಹೇಳಿದರು.

<><*<><>*><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ -ಇಸ್ರೋ ಇಂದು ಬೆಳಿಗ್ಗೆ ಸಣ್ಣ ಉಪಗ್ರಹ ಉಡಾವಣಾ ವಾಹಕ-ಎಸ್‌ಎಸ್‌ಎಲ್‌ವಿ ಭೂ ವೀಕ್ಷಣಾ ಉಪಗ್ರಹ ಇಒಎಸ್-೦೮ ಅನ್ನು ಉಡಾವಣೆ ಮಾಡಿದೆ. ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಬೆಳಿಗ್ಗೆ ೯:೧೭ಕ್ಕೆ ೧೭೫.೫ ಕೆಜಿ ತೂಕದ ಉಪಗ್ರಹ ನಭೋ ಮಂಡಲಕ್ಕೆ ಚಿಮ್ಮಿತು. ಇದರ ಜೊತೆ ಚೆನ್ನೈ ಮೂಲದ ನವೋದ್ಯಮ ಸಂಸ್ಥೆ ಸ್ಪೇಸ್ ರಿಕ್ಷಾದಿಂದ ನಿರ್ಮಿಸಲಾದ ಎಸ್‌ಆರ್-೦ ಉಪಗ್ರಹವನ್ನೂ ಸಹ ಉಡಾವಣೆ ಮಾಡಲಾಯಿತು.

<><*<><>*><>

ಪ್ರಧಾನ ಮಂತ್ರಿ ನರೇಂದ್ರ ಮೋದಿ ನಾಯಕತ್ವದಡಿ ಇಸ್ರೋ ಇಒಎಸ್ -೦೮ ಭೂ ವೀಕ್ಷಣ ಉಪಗ್ರಹ ಎಸ್‌ಎಸ್‌ಎಲ್‌ವಿ -ಡಿ೩ ಯನ್ನು ಯಶಸ್ವಿಯಾಗಿ ಉಡಾವಣೆ ಮಾಡಿರುವ ಹಿನ್ನೆಲೆಯಲ್ಲಿ ಇಸ್ರೋ ಸಂಸ್ಥೆಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಶ್ಲಾಘಿಸಿದ್ದಾರೆ. ಭಾರತದ ಬಾಹ್ಯಾಕಾಶ ಕಾರ್ಯಕ್ರಮಗಳು ನವ ಮನ್ವಂತರದತ್ತ ಸಾಗಿದ್ದು, ಅತ್ಯಾಧುನಿಕ ತಂತ್ರಜ್ಞಾನ ಮತ್ತು ನಾವಿನ್ಯತೆಗಾಗಿ ಇಸ್ರೋ ದೇಶಕ್ಕೆ ಹೆಮ್ಮೆಯ ಸಂಸ್ಥೆಯಾಗಿ ಹೊರಹೊಮ್ಮಿದೆ ಎಂದು ಶ್ಲಾಘಿಸಿದ್ದಾರೆ.

<><*<><>*><>

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ೫೦ ಹೊಸ ಪ್ರಯಾಣಿಕರ ಬಸ್‌ನಲ್ಲಿ ಹಾಗೂ ೧೨ ಸರಕು ಸಾಗಣೆ ವಾಹನಗಳ ಮೂಲಕ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಗತ್ಯ ವಸ್ತುಗಳ ಸಾಗಾಣೆಗೆ ಇಂದಿನಿಂದ ಚಾಲನೆ ನೀಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ಯ ಸಚಿವ ಪ್ರಿಯಾಂಕ ಖರ್ಗೆ ಹೇಳಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು ಸೆಪ್ಟೆಂಬರ್ ಅಂತ್ಯದ ವೇಳೆಗೆ ಇನ್ನೂ ೭೦ ಬಸ್‌ಗಳು ಸೇರ್ಪಡೆಯಾಗಲಿವೆ ಎಂದು ಹೇಳಿದರು.

<><*<><>*><>

ಸರ್ಕಾರದ ಮಹತ್ವಾಂಕ್ಷೆ ಗ್ಯಾರಂಟಿ ಯೋಜನೆಗಳ ಸೌಲಭ್ಯದ ಪ್ರಯೋಜನವನ್ನು ಪಡೆಯಲು ತಕ್ಷಣದಲ್ಲಿ ಸ್ಪಂದಿಸಲು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ರಚನೆ ಮಾಡಲಾಗಿದೆ ಎಂದು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವ ಮಂಕಾಳ ಎಸ್ ವೈದ್ಯ ಹೇಳಿದರು. ಕಾರವಾರದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಜಿಲ್ಲಾಮಟ್ಟದಲ್ಲಿ ಅಧ್ಯಕ್ಷರು, ೫ ಉಪಾಧ್ಯಕ್ಷರು ೧೭ ಸದಸ್ಯರು ಮತ್ತು ಜಿಲ್ಲಾ ಪಂಚಾಯತ್ ಸಿಇಒ ಸದಸ್ಯ ಕಾರ್ಯದರ್ಶಿ ಪ್ರಾಧಿಕಾರ ಒಳಗೊಂಡ ಹಾಗೂ ಪ್ರತಿ ತಾಲೂಕಿನಲ್ಲಿ ಅಧ್ಯಕ್ಷರು ಸೇರಿದಂತೆ ೧೪ ಸದಸ್ಯರ ಪ್ರಾಧಿಕಾರ ರಚಿಸಿ ಆದೇಶಿಸಲಾಗಿದೆ ಎಂದರು.

<><*<><>*><>

ಕೇಂದ್ರ ಪ್ರವಾಸೋದ್ಯಮ ಇಲಾಖೆಯು ದೇಖೋ ಅಪ್ನಾ ದೇಶ್ ಪೀಪಲ್ಸ್ ಚಾಯ್ಸೆಂಬ ನೂತನ ಯೋಜನೆ ಜಾರಿಗೆ ತಂದಿದೆ. ಪ್ರವಾಸಿ ತಾಣಕ್ಕೆ ಪ್ರವಾಸಿಗರಿಂದಲೇ ಮತದಾನ ಮಾಡಿಸುವ ಯೋಜನೆ ಜಿಲ್ಲೆಯಲ್ಲಿ ಜಾರಿಮಾಡಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ. ಅಧಿಕ ಮತ ಪಡೆಯುವ

ಪ್ರವಾಸಿ ತಾಣಕ್ಕೆ ಹೆಚ್ಚಿನ ಅನುದಾನ ನೀಡಲು ಕೇಂದ್ರ ಪ್ರವಾಸೋದ್ಯಮ ಇಲಾಖೆ ಮುಂದಾಗಿದ್ದು, ಜಿಲ್ಲೆಯ ಸಾರ್ವಜನಿಕರು ಪ್ರವಾಸಿ ತಾಣಗಳ ಕುರಿತು ಮತದಾನ ಮಾಡಬಹುದಾಗಿದೆ ಎಂದು ಅವರು ಹೇಳಿದರು.

**<><*<><>*><>**

ಶ್ರಾವಣ ಮಾಸದ ೨ನೇ ಶುಕ್ರವಾರವಾದ ಇಂದು ವರಮಹಾಲಕ್ಷ್ಮೀ ಹಬ್ಬವನ್ನು ನಾಡಿನಾದ್ಯಂತ ಶ್ರದ್ಧೆ ಮತ್ತು ಭಕ್ತಿಯಿಂದ ಆಚರಿಸಲಾಗುತ್ತಿದೆ. ಬೆಂಗಳೂರಿನಲ್ಲಿ ಹಬ್ಬದ ಸಡಗರ ಕಂಡುಬಂದಿದೆ. ಮಾರುಕಟ್ಟೆಗಳಲ್ಲಿ ಮಹಿಳೆಯರು ಹಬ್ಬಕ್ಕಾಗಿ ಹಣ್ಣು, ಹೂವು, ಮತ್ತಿತರ ವಸ್ತುಗಳನ್ನು ಸಡಗರದಿಂದ ಖರೀದಿಸುತ್ತಿರುವುದು ಕಂಡು ಬಂದಿದೆ. ವಾಣಿಜ್ಯ ನಗರಿ ದಾವಣಗೆರೆ ಜಿಲ್ಲಾದ್ಯಂತ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಮನೆಗಳನ್ನು ತಳಿರು ತೋರಣಗಳಿಂದ ಅಲಂಕರಿಸಿ ದೇವಿಯನ್ನು ಪ್ರತಿಷ್ಠಾಪಿಸಿ ಬಗೆ ಬಗೆಯ ಆಭರಣಗಳನ್ನು ಹಾಕಿ ಪೂಜೆ ಸಲ್ಲಿಸಿ ನೈವೇದ್ಯ ಸಮರ್ಪಿಸಲಾಯಿತು. ನಂತರ ಮಹಿಳೆಯರು ಪರಸ್ಪರ ಉಡಿ ತುಂಬಿಕೊಂಡು ಶುಭಾಶಯ ವಿನಿಮಯ ಮಾಡಿಕೊಳ್ಳುತ್ತಿದ್ದಾರೆ. ಕೋಲಾರ ಜಿಲ್ಲೆಯಲ್ಲೂ ಮಹಿಳೆಯರು ಕುಟುಂಬದ ಯೋಗಕ್ಷೇಮ, ಸಮೃದ್ಧಿ, ಸಂಪನ್ಮೂಲ ವೃದ್ಧಿಗಾಗಿ ವರಮಹಾಲಕ್ಷ್ಮೀ ವ್ರತವನ್ನು ಆಚರಿಸುತ್ತಿದ್ದಾರೆ. ನಗರದ ದೇವಾಲಯಗಳಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನಡೆಯುತ್ತಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಾಡಿನ ಸಮಸ್ತ ಜನತೆಗೆ ಶ್ರೀವರ ಮಹಾಲಕ್ಷ್ಮಿ ಮಾತೆ ಸುಖ, ಶಾಂತಿ, ನೆಮ್ಮದಿ, ಸಮೃದ್ಧಿ, ಆಯುರಾರೋಗ್ಯ ನೀಡಿ ಹರಸಲಿ ಎಂದು ಸಾಮಾಜಿಕ ಜಾಲತಾಣದ ಮೂಲಕ ಪ್ರಾರ್ಥಿಸಿದ್ದಾರೆ. ವರಮಹಾಲಕ್ಷ್ಮೀ ಹಬ್ಬಕ್ಕೆ ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕಾ ಸಚಿವ ಎಚ್ ಡಿ ಕುಮಾರಸ್ವಾಮಿ ಶುಭಾಶಯ ಕೋರಿದ್ದಾರೆ. ವರಮಹಾಲಕ್ಷ್ಮೀ ಪ್ರತಿಯೊಬ್ಬರಿಗೂ ಸುಖ, ಶಾಂತಿ, ನೆಮ್ಮದಿ, ಸಮೃದ್ಧಿ ಕರುಣಿಸಲಿ ಎಂದು ಹಾರೈಸಿದ್ದಾರೆ.

**<><*<><>*><>**

೧. ಬೆಸ್ಕಾಂ ವ್ಯಾಪ್ತಿಯ ಬೆಂಗಳೂರಿನ ಪಾಟರಿ ರಸ್ತೆ, ವಿಕ್ಟೋರಿಯ ಸ್ಟೇಷನ್, ಹೂಡಿ, ಮತ್ತಿತರ ಪ್ರದೇಶಗಳಲ್ಲಿ ಕೆಪಿಟಿಸಿಎಲ್ ದುರಸ್ತಿ ಕಾಮಗಾರಿ ಕೈಗೊಂಡಿರುವ ಹಿನ್ನೆಲೆಯಲ್ಲಿ ಈ ಭಾಗದ ಆಸುಪಾಸಿನಲ್ಲಿ ಇಂದು ವಿದ್ಯುತ್ ವ್ಯತ್ಯಾಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

೨. ಬೆಂಗಳೂರಿನ ವಾಸವಿ ವೇದ ಪಾಠಶಾಲೆಯ ಸಂಸ್ಕೃತ ವಿದ್ಯಾರ್ಥಿಗಳು ನಿನ್ನೆ ವೈಭವದ ಸ್ವಾತಂತ್ರ್ಯದಿನೋತ್ಸವ ಆಚರಿಸಲಾಯಿತು. ಪಾಠಶಾಲೆಯ ಅಧ್ಯಕ್ಷ ಡಾಃ ವಿಷ್ಣು ಭರತ್ ಅಲಂಪಲ್ಲಿ ಧ್ವಜಾರೋಹಣ ನೆರವೇರಿಸಿ ಸಂಸ್ಕೃತ ವಿದ್ಯಾರ್ಥಿಗಳು ವೇದಾಧ್ಯಯನ ಜೊತೆಗೆ ರಾಷ್ಟ್ರಾಭಿಮಾನ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

೩. ಮಂಡ್ಯದಲ್ಲಿ ಡಿಸೆಂಬರ್ ೨೦ ರಿಂದ ಮೂರು ದಿನಗಳ ಕಾಲ ನಡೆಯಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅದ್ದೂರಿಯಾಗಿ ಆಚರಿಸಲು ಸಿದ್ಧತೆ ಆರಂಭಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೪. ಹಾವೇರಿ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಸೆಪ್ಟೆಂಬರ್ ೧೪ರಂದು ರಾಷ್ಟ್ರೀಯ ಲೋಕ ಅದಾಲತ್ ಜರುಗಲಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ಕೆ.ಸಿ. ಸದಾನಂದಸ್ವಾಮಿ ತಿಳಿಸಿದ್ದಾರೆ.

೫. ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಬೆಳೆ ವಿಮೆ ಪಾವತಿ ಮಾಡುವ ಅವಧಿಯನ್ನು ಆಗಸ್ಟ್ ೨೫ರ ವರೆಗೆ ವಿಸ್ತರಿಸಲಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರಹಳ್ಳಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**